# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 505
ಸದಸ್ಯರು ಹೆಸರು : ಶ್ರೀ. ಐವನ್ ಡಿ' ಸೋಜಾ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು).
ಉತ್ತರಿಸಬೇಕಾದ ದಿನಾಂಕ : 20.08.2026
ಉತ್ತರಿಸುವ ಸಚಿವರು : ಗೃಹ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ವಾಹನ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರಕ್ಕೆ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಸಂಚಾರ ನಿಯಮ ಉಲ್ಲಂಘನೆಗಳಿಗೆ ಕಡಿವಾಣ ಹಾಕಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಸಾರ್ವಜನಿಕರಿಗೆ ಸಂಚಾರಿ ನಿಯಮಗಳ ಬಗ್ಗೆ ಅರಿವು ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | • ಸಂಚಾರ ನಿಯಮ ಉಲ್ಲಂಘನೆಗಳ ವಿರುದ್ಧ ಮೋಟಾರು ವಾಹನ ಅಧಿನಿಯಮದ ಕಲಂಗಳ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿ, ದಂಡ ವಿಧಿಸಿ ಸಂಚಾರ ನಿಯಮ ಉಲ್ಲಂಘನೆಗಳು ಪುನರಾವರ್ತನೆಯಾಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತಿದೆ.<br>• ಶಾಲಾ ಕಾಲೇಜು ವಿದ್ಯಾರ್ಥಿ ಮತ್ತು ಶಿಕ್ಷಕ ವೃಂದದವರಿಗೆ, ಆಟೋರಿಕ್ಷಾ, ಕ್ಯಾಬ್ ಚಾಲಕರುಗಳಿಗೆ, ಕೆ.ಎಸ್.ಆರ್.ಟಿ.ಸಿ, ಖಾಸಗಿ ಬಸ್, ಶಾಲಾ ಬಸ್ ಚಾಲಕರುಗಳಿಗೆ, ವಾಹನ ಚಾಲಕರುಗಳಿಗೆ ಸಂಚಾರ ನಿಯಮಗಳ ಪಾಲನೆಯ & ಸಂಚಾರ ನಿಯಮ ಉಲ್ಲಂಘನೆಗಳಿಂದಾಗುವ ಪರಿಣಾಮಗಳ ಬಗ್ಗೆ ಅರಿವು ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.<br>• ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ಟ್ವಿಟರ್, ಯೂಟ್ಯೂಬ್ ಹಾಗೂ ಇನ್‌ಸ್ಟಾಗ್ರಾಮ್‌ಗಳ ಮೂಲಕ ಸಂಚಾರ ನಿಯಮಗಳ ಪಾಲನೆಯ ಮಹತ್ವದ ಬಗ್ಗೆ ಹಾಗೂ ಸಂಚಾರ ನಿಯಮ ಉಲ್ಲಂಘನೆಗಳಿಂದಾಗುವ ಪರಿಣಾಮಗಳ ಬಗ್ಗೆ ಪೋಸ್ಟರ್‌ಗಳನ್ನು ಅಪ್ಲೋಡ್ ಮಾಡುವ ಮೂಲಕ ಸಂಚಾರ ನಿಯಮ ಪಾಲನೆಯ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. |

<table>
<tr>
<td>(ಇ)</td>
<td>ಕಳೆದ 3 ವರ್ಷಗಳಿಂದ ಸಂಚಾರಿ ನಿಯಮಗಳ ಉಲ್ಲಂಘನೆಗಾಗಿ ವಿಧಿಸಿರುವ ದಂಡದ ಮೊತ್ತ ಎಷ್ಟು;</td>
<td>
<table>
<tr><th>ವರ್ಷ</th><th>ದಾಖಲಿಸಿದ ಒಟ್ಟು ಪ್ರಕರಣಗಳು</th><th>ಸಂಚಾರಿ ನಿಯಮಗಳ ಉಲ್ಲಂಘನೆಗಾಗಿ ವಿಧಿಸಿರುವ ದಂಡ ಮೊತ್ತ (ರೂ.ಗಳಲ್ಲಿ)</th></tr>
<tr><td>2023</td><td>12730058</td><td>6847579377</td></tr>
<tr><td>2024</td><td>16160502</td><td>9159544299</td></tr>
<tr><td>2025</td><td>16029058</td><td>916423369</td></tr>
<tr><td>2026</td><td>11778074</td><td>6693932610</td></tr>
</table>
</td>
</tr>
<tr>
<td>(ಈ)</td>
<td>ದಂಡ ವಸೂಲಾತಿ ಮೊತ್ತವನ್ನು ಯಾವ ಉದ್ದೇಶಕ್ಕಾಗಿ ಬಳಸಲಾಗುತ್ತಿದೆ? (ವಿವರ ನೀಡುವುದು)</td>
<td>ಪ್ರತಿ ಸಂಚಾರ ಠಾಣೆಯಿಂದ ಸಂಗ್ರಹವಾಗುವ ದಂಡದ ಮೊತ್ತವನ್ನು ಸರ್ಕಾರದ ಸಂಚಾರ ನಿಯಮ ಉಲ್ಲಂಘನೆಯ ದಂಡಗಳ ಲೆಕ್ಕ ಶೀರ್ಷಿಕೆ 0055-00-103-0-04 ಗೆ ಜಮೆ ಮಾಡಲಾಗುತ್ತಿದೆ. ಸಂಚಾರ ಪೊಲೀಸ್ ವಿಭಾಗಕ್ಕೆ ಈ ಮೊತ್ತವನ್ನು ಬಳಸಿಕೊಳ್ಳುವ ಅಧಿಕಾರ ಇರುವುದಿಲ್ಲ.<br><br>ಸರ್ಕಾರಿ ಆದೇಶ ಸಂಖ್ಯೆ: ಹೆಚ್ ಡಿ 11 ಇಫ್ಎಸ್ 2019, ಬೆಂಗಳೂರು ದಿನಾಂಕ:21.08.2019 ರೀತ್ಯ ಸಂಚಾರ ನಿಯಮ ಉಲ್ಲಂಘನಾ ಪ್ರಕರಣಗಳಲ್ಲಿ ಸಂಗ್ರಹಿಸಲಾಗುವ ದಂಡದ ಶೇ. 50 ರಷ್ಟು ಅನುದಾನವನ್ನು ರಸ್ತೆ ಸುರಕ್ಷತೆಗೆ ವ್ಯಯ ಮಾಡಲು ಆದೇಶಿಸಿದೆ (ವಿವರವನ್ನು ಅನುಬಂಧದಲ್ಲಿ ಒದಗಿಸಿದೆ).</td>
</tr>
</table>

**ಹೆಚ್‌ಡಿ 480 ಎಸ್‌ಎಸ್‌ಟಿ 2026**

(ಪ್ರಿಯಾಂಕ್ ಖರ್ಗೆ)
ಗೃಹ ಸಚಿವರು.

(2)

ಅನುಬಂಧ-1

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ಎಲ್ಲಾ ನಗರಗಳು ಮತ್ತು ಇತರ ಜಿಲ್ಲಾ ಪೊಲೀಸ್ ಘಟಕಗಳಲ್ಲಿ ಸಂಚಾರ ಉಲ್ಲಂಘನೆ ಪ್ರಕರಣಗಳಲ್ಲಿ ಸಂಗ್ರಹಿಸಲಾಗುತ್ತಿರುವ ದಂಡದ ಮೊತ್ತದಲ್ಲಿ ಶೇ.50ರ ಮೊತ್ತವನ್ನು ರಸ್ತೆ ಸುರಕ್ಷತೆಗೆ ವ್ಯಯ ಮಾಡುವ ಬಗ್ಗೆ ಆದೇಶ.

ಓದಲಾಗಿದೆ: ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರವರ ಪತ್ರ ಸಂಖ್ಯೆ: ಸಿ.ಟಿ.ಆರ್.ಎಸ್. 1/04/2019-20, ದಿನಾಂಕ: 25.06.2019.

No. 46584
27 AUG 2019

ಪ್ರಸ್ತಾವನೆ:

ಮೇಲೆ ಓದಲಾದ ಪತ್ರದಲ್ಲಿ, ದಿನಾಂಕ 29.01.2019 ರಂದು ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರದ 2ನೇ ಸಭೆಯಲ್ಲಿ ಪೊಲೀಸ್ ಇಲಾಖೆಯಲ್ಲಿ ಬೆಂಗಳೂರು ನಗರದ ಸಂಚಾರ ಉಲ್ಲಂಘನೆ ಪ್ರಕರಣಗಳಲ್ಲಿ ಸಂಗ್ರಹಿಸಲಾಗುತ್ತಿರುವ ದಂಡದ ಮೊತ್ತದಲ್ಲಿ ಅರ್ಧದಷ್ಟು ಮೊತ್ತವನ್ನು ರಸ್ತೆ ಸಂಚಾರ ಅಭಿವೃದ್ಧಿಗೆ ಮೀಸಲಿಡಲಾಗುತ್ತಿದೆ. ಇದೇ ಮಾದರಿಯಲ್ಲಿ ಇತರ ನಗರಗಳು ಸೇರಿದಂತೆ ಎಲ್ಲಾ ಜಿಲ್ಲೆಗಳಿಗೆ ದಂಡದ ಶೇ.50 ಅನುದಾನವನ್ನು ರಸ್ತೆ ಸುರಕ್ಷತಾ ವ್ಯಯ ಮಾಡಲು ಟ್ರ್ಯಾಕ್ ಯೋಜನೆಯಡಿ ಕ್ರಿಯಾ ಯೋಜನೆಯನ್ನು ತಯಾರಿಸಿ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ದಿನಾಂಕ 29.01.2019 ರಂದು ಸಭೆಯಲ್ಲಿ ಪ್ರಸ್ತಾಪಿಸಿರುತ್ತಾರೆ.

ದಿನಾಂಕ 17.04.2019ರ ಸರ್ಕಾರದ ಆದೇಶದಲ್ಲಿ 2005-06ನೇ ಸಾಲಿನ ಆಯವ್ಯಯದ ಭಾಷಣದಲ್ಲಿ ಆಗಿನ ಮುಖ್ಯಮಂತ್ರಿಗಳ ಸಂಚಾರ ಸುಧಾರಣಾ ನಿಧಿಗೆ ದಂಡದ ಹಣದಲ್ಲಿ ಸಂಗ್ರಹಿಸಲಾದ ಶೇ.50 ರಷ್ಟನ್ನು ವರ್ಗಾಯಿಸಲಾಗುವುದು, ಹಾಗೂ ರಾಜ್ಯದ ಈ ನಿಧಿಯನ್ನು ಬಳಸಿಕೊಳ್ಳಲಾಗುವುದು ಎಂದು ಘೋಷಿಸಿದ್ದರಿಂದ ಬೆಂಗಳೂರು ನಗರದ ಹಾಗೂ 06 ನಗರಪಾಲಿಕೆಗಳ ಸಂಚಾರ ವ್ಯವಸ್ಥೆಯನ್ನು ಸುಧಾರಣೆಗೊಳಿಸಲು ಸಂಚಾರ ವ್ಯವಸ್ಥೆ ಸುಧಾರಣಾ ನಿಧಿಯನ್ನು ಕೆಲವು ನಿಬಂಧನೆಗಳಿಗೆ ಒಳಪಟ್ಟು ಸ್ಥಾಪಿಸಲು ಸರ್ಕಾರದ ಮಂಜೂರಾತಿಯನ್ನು ನೀಡಿ ಆದೇಶಿಸಲಾಗಿರುತ್ತದೆ. ರಾಜ್ಯದಲ್ಲಿ ಸಂಚಾರಿ ನಿಯಮಗಳನ್ನು ಉಲ್ಲಂಘಿಸುವವರ ವಿರುದ್ಧ ಪ್ರಕರಣಗಳನ್ನು ದಾಖಲಿಸುತ್ತಿದ್ದು, ಸದರಿ ಪ್ರಕರಣಗಳಿಂದ ಸಂಗ್ರಹಿಸಿದ ದಂಡ ಮೊತ್ತವನ್ನು ಸರ್ಕಾರಕ್ಕೆ ಜಮಾ ಮಾಡಲಾಗುತ್ತಿದೆ.

ಆದ್ದರಿಂದ, ಮಾನ್ಯ ಮುಖ್ಯ ಕಾರ್ಯದರ್ಶಿಯವರು ದಿನಾಂಕ 29.01.2019ರ ನಡವಳಿಯಲ್ಲಿ ನೀಡಿರುವ ನಿರ್ದೇಶನದಂತೆ ರಾಜ್ಯದ ಎಲ್ಲಾ ಘಟಕಗಳಲ್ಲಿ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳಲ್ಲಿ ಘಟಕಾಧಿಕಾರಿಗಳು ಸಂಗ್ರಹಿಸಲಾಗುತ್ತಿರುವ ದಂಡದ ಮೊತ್ತದಲ್ಲಿ ಶೇ.50 ರಷ್ಟು ಮೊತ್ತವನ್ನು ಸದರಿ ಘಟಕಗಳಿಗೆ ರಸ್ತೆ ಸುರಕ್ಷತೆಗಳಿಗೆ ವ್ಯಯ ಮಾಡಲು ಸರ್ಕಾರದ ಮಂಜೂರಾತಿ ನೀಡುವಂತೆ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು ಇವರು ಕೋರಿರುತ್ತಾರೆ.

ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರ ರವರ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 11 ಐಎಫ್‌ಎಸ್ 2019, ಬೆಂಗಳೂರು,**

**ದಿನಾಂಕ: 21/ಆಗಸ್ಟ್/2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ಇತರೆ ನಗರಗಳು ಸೇರಿದಂತೆ ಎಲ್ಲಾ ಜಿಲ್ಲೆಗಳಲ್ಲಿ ಸಂಚಾರ ಉಲ್ಲಂಘಿಸಿ ಪ್ರಕರಣದಲ್ಲಿ ಸಂಗ್ರಹಿಸಲಾಗುವ ದಂಡದ ಶೇಕಡಾ 50ರಷ್ಟು ಅನುದಾನವನ್ನು ರಸ್ತೆ ಸುರಕ್ಷತೆಗೆ ವ್ಯಯ ಮಾಡುವ ಪ್ರಸ್ತಾವನೆಗೆ ಸಹಮತಿ ನೀಡಿ ಆದೇಶಿಸಿದೆ.

ADCP (CTRS)

-2



ile No. HD/480/SST/2026-LO_A-HOME DEPARTMENT SEC (Computer No. 2267638)

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 27 ವೆಚ್ಚ-11/2019, ದಿನಾಂಕ 26.06.2019 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಂಗನಗೌಡ ಮೇಟಿ)
ಸರ್ಕಾರದ ಅಧೀನ ಕಾರ್ಯದರ್ಶಿ,(ಪ್ರ)
ಒಳಾಡಳಿತ ಇಲಾಖೆ (ಪೊಲೀಸ್ ವೆಚ್ಚ)

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ) ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560 001.
2. ಮಹಾಲೇಖಪಾಲರು (ಇ & ಆರ್.ಎಸ್.ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560 001.
3. ಮಹಾಲೇಖಪಾಲರು (ಎ&ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329 /5369, ಬೆಂಗಳೂರು-560 001.
4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿ ಮತ್ತು ಆಂತರಿಕ ಆರ್ಥಿಕ ಸಲಹೆಗಾರರು, ಒಳಾಡಳಿತ ಇಲಾಖೆ, ಬಹುಮಹಡಿ ಕಟ್ಟಡ ಬೆಂಗಳೂರು.
6. ನಿರ್ದೇಶಕರು, ಖಜಾನೆ ನಿರ್ದೇಶನಾಲಯ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-11), ವಿಧಾನಸೌಧ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ (ಸಮನ್ವಯ), ವಿಧಾನಸೌಧ.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.



ile No HD/480/SST/2026-LO_A-HOME DEPARTMENT SEC (Computer No. 2267638)